ಸಂಪುಟ: ೦೭/ ಸಂಚಿಕೆ: ೨೦೬/ ಮಂಗಳವಾರ ದಿನಾಂಕ : ೦೭-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 206/TUESDAY Date : 07-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ವಾಲ್ಮೀಕಿ ಪ್ರಶಸ್ತಿಗೆ ಐದು ಮಂದಿ ಸಾಧಕರು ಆಯ್ಕೆ

**ಬೆಂಗಳೂರು:** 2025ನೆ ಸಾಲಿನ ರಾಜ್ಯ ಮಟ್ಟದ ಪ್ರತಿಷ್ಠಿತ 'ಮಹರ್ಷಿ ವಾಲ್ಮೀಕಿ ಪ್ರಶಸ್ತಿ' ಪ್ರಕಟವಾಗಿದ್ದು, ಪತ್ರಕರ್ತ ನಾಗರಾಜು ಗಾಣದ ಹುಣಸೆ, ರಂಗಕರ್ಮಿ ಪಿ.ತಿಪ್ಪೇಸ್ವಾಮಿ ಸೇರಿದಂತೆ ಐದು ಮಂದಿ ಸಾಧಕರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಮಾಧ್ಯಮ ಕ್ಷೇತ್ರದಲ್ಲಿ ಬೆಂಗಳೂರಿನ ನಾಗರಾಜು ಗಾಣದ ಹುಣಸೆ, ರಂಗಭೂಮಿ



ಕ್ಷೇತ್ರದಲ್ಲಿ ಚಿತ್ರದುರ್ಗದ ಪಿ.ತಿಪ್ಪೇಸ್ವಾಮಿ, ಸಂಘಟನೆ ಕ್ಷೇತ್ರದಲ್ಲಿ ಕೊಡಗು ಜಿಲ್ಲೆಯ ಜೆ.ಕೆ.ಮುತ್ತಮ್ಮ, ಸಮಾಜ ಸೇವೆ ಕ್ಷೇತ್ರದಲ್ಲಿ ವಿಜಯಪುರದ ಮಳಸಿದ್ದ ಲಕ್ಷ್ಮಣ ನಾಯಕೋಡಿ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ವಿಜಯನಗರ ಜಿಲ್ಲೆಯ ಕೆ.ಉಚ್ಚಂಗಪ್ಪ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ಶೈಕ್ಷಣಿಕ ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವಂತಹ ಬೆಂಗಳೂರು, ಮೈಸೂರು, ಬೆಳಗಾವಿ, ಕಲಬುರಗಿ ಕಂದಾಯ ವಿಭಾಗಗಳು ಹಾಗೂ ಬೆಂಗಳೂರು ಕೇಂದ್ರ ಸ್ಥಾನದಿಂದ ತಲಾ ಒಬ್ಬರಂತೆ ಒಟ್ಟು ಐದು ಸಾಧಕರನ್ನು ಪ್ರತಿ ವರ್ಷ ಆಯ್ಕೆ ಮಾಡಲಾಗುತ್ತಿದೆ. ಅದರಂತೆ ಅ.3ರಂದು ನಡೆದ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಆಯ್ಕೆ ಸಮಿತಿ ಸಭೆಯಲ್ಲಿ ಪ್ರಸಕ್ತ ಸಾಲಿನ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯ ಪುರಸ್ಕೃತರನ್ನು ಆಯ್ಕೆ ಮಾಡಲಾಗಿದೆ.

### ಇಂದು ಪ್ರಶಸ್ತಿ ಪ್ರದಾನ

ಪ್ರಶಸ್ತಿಯು 5 ಲಕ್ಷ ರೂಪಾಯಿ ನಗದು ಹಾಗೂ 20 ಗ್ರಾಂ ಚಿನ್ನದ ಪದಕ ಒಳಗೊಂಡಿರುತ್ತದೆ. ಪ್ರಶಸ್ತಿಗಳನ್ನು ನಾಳೆ (ಅ.7) ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯುವ ವಾಲ್ಮೀಕಿ ಜಯಂತಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರದಾನ ಮಾಡಲಿದ್ದಾರೆ. ಪ್ರಶಸ್ತಿಯು ನಗದು ಮೊತ್ತ ಹಾಗೂ ಬಂಗಾರದ ಪದಕಗಳ ಮೌಲ್ಯವನ್ನು ಒಳಗೊಂಡಿದೆ.

**ಒಂದೇ ದಿನ 2ಸಾವಿರ ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ**

# ಕೊಪ್ಪಳ ಜಿಲ್ಲೆಯಲ್ಲಿ ಅಭಿವೃದ್ಧಿ ಕ್ರಾಂತಿ

**ಕೊಪ್ಪಳ:** ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ರಾಜ್ಯ ಸರ್ಕಾರದಲ್ಲಿ ಹಣದ ಕೊರತೆ ಇದೆ ಎನ್ನುವ ವಿರೋಧ ಪಕ್ಷಗಳ ಟೀಕೆಯಲ್ಲಿ ಹುರುಳಿಲ್ಲ, ಇದುವರೆಗೂ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ 13000 ಕೋಟಿ ಅನುದಾನ ನೀಡಿದೆ. ಸೋಮವಾರ ಒಂದೇ ದಿನ 2 ಸಾವಿರ ಕೋಟಿ ರೂ ಮೊತ್ತದ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಅಡಿಗಲ್ಲು ಸೇರಿದಂತೆ ಚಾಲನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಕೊಪ್ಪಳ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆವತಿಯಿಂದ ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ರೂ. 2000 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ/ ಶಂಕುಸ್ಥಾಪನೆ ನೆರವೇರಿಸಿ, ವಿವಿಧ ಇಲಾಖಾ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಿ ಮಾತನಾಡಿದ ಅವರು, ಕೃಷ್ಣ ಮೇಲ್ದಂಡೆ ವಿಚಾರದಲ್ಲಿ ರೈತರಿಗೆ 80 ಸಾವಿರ ಕೋಟಿ ಪರಿಹಾರ ಕೊಡ್ತಾ ಇರುವುದೂ ಸಹ ನಮ್ಮ ಸರ್ಕಾರವೇ ಎಂದು ಹೇಳಿದರು.

ನುಡಿದಂತೆ ನಡೆದ ಯಾವುದಾದರೂ ಸರ್ಕಾರ ಇದ್ದರೆ ಅದು ಸಿದ್ದರಾಮಯ್ಯ ನೇತೃತ್ವದ ನಮ್ಮ ಸರ್ಕಾರ. ವಿರೋಧ ಪಕ್ಷಗಳು ತಮ್ಮ ಅವಧಿಯಲ್ಲಿ ಬಡವರಿಗೆ ಒಂದೇ ಒಂದು ಮನೆ ಕೊಡಲಿಲ್ಲ. ಅಭಿವೃದ್ಧಿ ಕಾರ್ಯ ಮಾಡಲಿಲ್ಲ. ಇಂತಹವರು ನಮ್ಮನ್ನು ಟೀಕಿಸುವ ನೈತಿಕತೆಯನ್ನು ಕಳೆದುಕೊಂಡಿದ್ದಾರೆ ಎಂದು ಟೀಕಿಸಿದರು.

ಗ್ಯಾರಂಟಿ ಯೋಜನೆಗಳ ಮೂಲಕ ನಮ್ಮ ಸರ್ಕಾರ ಕಳೆದ ಎರಡು ವರ್ಷದಲ್ಲಿ ಒಂದು ಲಕ್ಷ ಕೋಟಿ ಹಣವನ್ನು ರಾಜ್ಯದ ಜನರ ಜೇಬಿಗೆ ಹಾಕಿದ್ದೇವೆ. ಇದರಿಂದ ರಾಜ್ಯದ ಜನರ ಕೊಳ್ಳುವ ಶಕ್ತಿ ಹೆಚ್ಚಾಗಿ ರಾಜ್ಯದ ಜನರ ತಲಾ ಆದಾಯ ಹೆಚ್ಚಾಗಿ ರಾಜ್ಯದ ಆರ್ಥಿಕತೆ ಪ್ರಗತಿ ಕಂಡಿದೆ ಎಂದರು.

ತಲಾ ಆದಾಯದಲ್ಲಿ ಇಡೀ ದೇಶದಲ್ಲಿ ಕನ್ನಡಿಗರೇ ನಂಬರ್ ಒನ್. ಇದು ನಮ್ಮ ಸರ್ಕಾರದ ಆರ್ಥಿಕ ಸಾಧನೆ. ತೆರಿಗೆ ಪಾವತಿಯಲ್ಲಿ ರಾಜ್ಯ ಇಡೀ ದೇಶದಲ್ಲಿ ಎರಡನೇ ಸ್ಥಾನದಲ್ಲಿದ್ದೇವೆ. ನಮ್ಮ ಯೋಜನೆಗಳು ಸರ್ವಧರ್ಮ ಹಾಗೂ ಸರ್ವಜಾತಿಗಳಿಗೂ ಸಹ ತಲುಪುತ್ತಿವೆ, ಇದು ನಮ್ಮ ಸರ್ಕಾರದ ಜಾತ್ಯತೀತ ಸಾಧನೆ ಎಂದರು.

ನಾವು ಎಲ್ಲಾ ಜಾತಿ, ಎಲ್ಲಾ ಧರ್ಮದವರ ಪ್ರಗತಿಗಾಗಿ ಯೋಜನೆ ರೂಪಿಸಿದೆವು ಹೀಗಾಗಿ ಎಲ್ಲಾ ಜಾತಿಯ, ಎಲ್ಲಾ



ಧರ್ಮದ ಜನರು ಸೇರಿ ರಾಜ್ಯದ ಆರ್ಥಿಕತೆಯನ್ನು ಪ್ರಗತಿಗೆ ಕೊಂಡೊಯ್ದರು ಎಂದು ಮೆಚ್ಚುಗೆ ಸೂಚಿಸಿದರು.

ಕೊಪ್ಪಳ ಜಿಲ್ಲೆಯೊಂದರಲ್ಲೇ 9 ಕೋಟಿ 22 ಲಕ್ಷ ಮಹಿಳೆಯರು ಉಚಿತವಾಗಿ ಪ್ರಯಾಣಿಸಿ ಜಿಲ್ಲೆಗೆ 330 ಕೋಟಿ ಖರ್ಚಾಗಿದೆ. ಗೃಹ ಲಕ್ಷ್ಮಿ ಯೋಜನೆಯಡಿ ಜಿಲ್ಲೆಯಲ್ಲಿ 317776 ಫಲಾನುಭವಿಗಳಿಗೆ 1283 ಕೋಟಿ ವಿತರಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ 275903 ಫಲಾನುಭವಿಗಳಿಗೆ 290 ಕೋಟಿ ಕೊಟ್ಟಿದ್ದೇವೆ. ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯ 1.96 ಕೋಟಿ ಜನರಿಗೆ 320 ಕೋಟಿ ಮೊತ್ತದ 39.097 ಮೆಟ್ರಿಕ್ ಟನ್ ದವಸಧಾನ್ಯಗಳನ್ನು ವಿತರಿಸಲಾಗಿದೆ ಎಂದು ವಿವರಿಸಿದ ಸಿಎಂ ಬೊಕ್ಕಸ ಖಾಲಿ ಆಗಿದ್ದರೆ ಇಷ್ಟೊಂದು ಪ್ರಮಾಣದ ಹಣವನ್ನು ಜನರಿಗೆ ಕೊಡಲಾಗುತ್ತಿತ್ತಾ ಎಂದು ಪ್ರಶ್ನಿಸಿದರು.

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಅವರ ಮನವಿಯಂತೆ ಮುಕ್ಕುಂಬಿ ಕೆರೆಗೆ ನೀರು ಹರಿಸಿದ್ದು ನಾವು. ಈಗ ಯಲಬುರ್ಗಾ ಕ್ಷೇತ್ರದ ಕೆರೆ ತುಂಬಿಸುವ ಯೋಜನೆಗೆ 650 ಕೋಟಿ ಹಣ ಕೊಡುತ್ತಿದ್ದೇವೆ ಎಂದು ಭರವಸೆ ನೀಡಿದರು. ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದಲ್ಲಿ ಆರಂಭಿಸಿರುವ ಸಮೀಕ್ಷೆಯಿಂದ ಜನತೆಗೆ ಅನುಕೂಲವಾಗಲಿದೆ. ಈ ಸಮೀಕ್ಷೆಯ ಮೂಲಕ ಸಿದ್ದರಾಮಯ್ಯ ಅವರು ಜನರನ್ನು ಕೂಡಿಸುವ ಕಾರ್ಯ ಮಾಡುತ್ತಿದ್ದಾರೆ ಎಂದ ಸಚಿವರು, ಈ ಸಮೀಕ್ಷೆಯು ರಾಜ್ಯದಲ್ಲಿ ಈಗಾಗಲೇ ಶೆ.75ರಷ್ಟು ಪೂರ್ಣವಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಈಗಾಗಲೇ ಶೆ.98 ಸಮೀಕ್ಷೆ ನಡೆದಿದೆ. ಯಲಬುರ್ಗಾ, ಕಾರಟಗಿ ಮತ್ತು ಕುಕನೂರ ತಾಲೂಕಿನಲ್ಲಿ ಈ ಸಮೀಕ್ಷೆಯು ಈಗಾಗಲೇ ಪೂರ್ಣವಾಗಿದೆ ಎಂದು ಅವರು ಹೇಳಿದರು.

ಸಚಿವರಾದ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಮಾತನಾಡಿ, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ನಿಯಮಿತವಾಗಿ ಬೇರೆ ಬೇರೆ ಜಿಲ್ಲೆಗಳಿಗೆ ಸಂಚರಿಸಿ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುತ್ತಿದ್ದು, ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ನಿತ್ಯ ನಿರಂತರವಾಗಿ ನಡೆಯುತ್ತಿವೆ. ಬಳ್ಳಾರಿ ಜಿಲ್ಲೆಯಲ್ಲಿ ಅಂದಾಜು 1.900 ಕೋಟಿ ರೂ. ಮೊತ್ತದಲ್ಲಿ, ಮೈಸೂರು ಜಿಲ್ಲೆಯಲ್ಲಿ ಅಂದಾಜು 1,500 ಕೋಟಿ ರೂ. ಮೊತ್ತದ, ಕಲಬುರಗಿ ಜಿಲ್ಲೆಯಲ್ಲಿ 1,200 ಕೋಟಿ ರೂ. ಮೊತ್ತದಲ್ಲಿ ನಾನಾ ಅಭಿವೃದ್ಧಿ ಕಾರ್ಯಗಳಿಗೆ ಮುಖ್ಯಮಂತ್ರಿಗಳು ಇತ್ತೀಚೆಗೆ ಚಾಲನೆ ನೀಡಿದ್ದಾರೆ ಎಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಮಾತನಾಡಿ, ರಾಜ್ಯದ ಪ್ರಗತಿ ಜೊತೆಗೆ ಜನರ ಆರ್ಥಿಕತೆಯನ್ನು ಸುಧಾರಿಸಲು ಸಿಎಂ ಸಿದ್ದರಾಮಯ್ಯನವರ ನೇತೃತ್ವದ ನಮ್ಮ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ನೀಡಿದೆ. ಇದರಿಂದ ಸುಮಾರು ಒಂದು ಲಕ್ಷ ಕೋಟಿ ರೂ.ಗಳನ್ನು ರಾಜ್ಯದ ಜನರ ಮನೆ ಬಾಗಿಲಿಗೆ ತಲುಪಿಸುತ್ತಿದೆ. ಬಡವರ ಮಕ್ಕಳು ಡಾಕ್ಟರ್ ಆಗಬೇಕೆಂಬ ಉದ್ದೇಶದಿಂದ ರಾಜ್ಯದ ಎಲ್ಲಾ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜುಗಳಾಬೇಕೆಂದು ಸಿಎಂ ಸಿದ್ದರಾಮಯ್ಯನವರು 2013ರಲ್ಲಿ ನಿರ್ಧರಿಸಿದ್ದು, ಇಂದು ರಾಜ್ಯದಲ್ಲಿ ಒಟ್ಟು 22 ಸರ್ಕಾರಿ ಮೆಡಿಕಲ್ ಕಾಲೇಜುಗಳಿವೆ. ಇದರಿಂದಾಗಿ ಮತ್ತು 371ಜೆ ಜಾತಿಯಿಂದಾ ನಮ್ಮ ಭಾಗದ ಸುಮಾರು 9 ಸಾವಿರ ಬಡ, ಹಿಂದುಳಿದ ವರ್ಗದ ಜನರ ಮಕ್ಕಳು ವೈದ್ಯರಾಗಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ, ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರಾದ ಕೆ.ರಾಜಶೇಖರ ಬಸವರಾಜ್ ಹಿಟ್ನಾಳ, ಸಿಂಧನೂರು ಶಾಸಕರಾದ ಹಂಪನಗೌಡ ಬಾದರ್ಲಿ, ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಅನ್ನದಾನಗೌಡ ಪಾಟೀಲ್ ಬಯ್ಯಾಪುರ, ಮುನಿರಾಬಾದ ತುಂಗಭದ್ರ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನ್ ಸಾಬ್ ನಬಿಸಾಬ ದೋಟಿಹಾಳ, ಕೊಪ್ಪಳ ನಗರಸಭೆಯ ಅಧ್ಯಕ್ಷರಾದ ಅಮ್ಜದ್ ಪಟೇಲ್ ಎಸ್.ಎಮ್. ಪಟೇಲ್, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ. ಶ್ರೀನಿವಾಸ್ ಗುಪ್ತಾ, ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ್, ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬಯ್ಯಾಪುರ, ಮಾಜಿ ಸಂಸದರಾದ ಕರಡಿ ಸಂಗಣ್ಣ, ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹಸಿನ್, ಕೌಶಲ್ಯ ಅಭಿವೃದ್ಧಿ, ಮನೋಜ್ ಕುಮಾರ್ ಮೀನಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ತುಳಸಿ ಮದ್ದಿನೇನಿ, ವಸತಿ ಇಲಾಖೆ ಸರ್ಕಾರದ ಕಾರ್ಯದರ್ಶಿಗಳು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಮತ್ತಿತರರು ಉಪಸ್ಥಿತರಿದ್ದರು.

### ಕೊಪ್ಪಳದ ಋಣ ತೀರಿಸೋದು ಬಾಕಿ ಇದೆ

ನಾನು ಕೊಪ್ಪಳಕ್ಕೆ ಕಾಲಿಟ್ಟಾಗಲೆಲ್ಲಾ ಮೈಸೂರಿಗೇ ಕಾಲಿಟ್ಟಷ್ಟು ಖುಷಿ ಆಗ್ತದೆ. ನಿಮ್ಮ ಪ್ರೀತಿಗೆ ಸದಾ ಋಣಿ. ರಾಜೀವ್ ಗಾಂಧಿ ಅವರ ಹತ್ಯೆ ಆಗದೇ ಹೋಗಿದ್ದರೆ ನಾನು ಕೊಪ್ಪಳ ಲೋಕಸಭಾ ಸದಸ್ಯ ಆಗಿರುತ್ತಿದ್ದೆ. ನಿಮ್ಮ ಪ್ರೀತಿಯ ಋಣ ನನ್ನ ಮೇಲಿದೆ. ಅರ್ಧ ಋಣ ತೀರಿಸಿದ್ದೇನೆ. ಉಳಿದ ಋಣವನ್ನೂ ತೀರಿಸ್ತೇನೆ ಎಂದರು.

## ಮಲ್ಲಿಕಾರ್ಜುನ ಖರ್ಗೆ ಭೇಟಿಯಾದ ಸಚಿವೆ ಹೆಬ್ಬಾಳಕರ್



**ಬೆಂಗಳೂರು:** ಅನಾರೋಗ್ಯದ ನಿಮಿತ್ತ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಮರಳಿ ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿರುವ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು, ಆರೋಗ್ಯ ವಿಚಾರಿಸಿ, ಶೀಘ್ರ ಪಕ್ಷ ಹಾಗೂ ಜನರ ಸೇವೆ ಮರಳುವಂತಾಗಲಿ ಎಂದು ಹಾರೈಸಿದರು.

ಇದೇ ವೇಳೆ, ನವೆಂಬರ್ 19ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನಡೆಸಲು ಉದ್ದೇಶಿಸಿರುವ ಅಂಗನವಾಡಿಯ ಸುವರ್ಣ ಮಹೋತ್ಸವ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಕುರಿತು ಸಚಿವರು ಖರ್ಗೆ ಅವರಿಗೆ ಮಾಹಿತಿ ನೀಡಿದರು.

## ರಾಜ್ಯದ ಶಾಲೆಗಳಿಗೆ ಶಿಕ್ಷಕರ ನೇಮಕಕ್ಕೆ ಸಿದ್ಧತೆ

**ಮಂಗಳೂರು:** ರಾಜ್ಯದ ಸರಕಾರಿ ಶಾಲೆಗಳಿಗೆ 13,000 ಶಿಕ್ಷಕರು ಹಾಗೂ ಅನುದಾನಿತ ಶಾಲೆಗಳಿಗೆ ಸುಮಾರು 5,500 ಶಿಕ್ಷಕರು ಸೇರಿದಂತೆ 18,500ಕ್ಕೂ ಅಧಿಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗಳ ಸಿದ್ಧತೆ ನಡೆದಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ.

ದ.ಕ. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದಿನ ಸರಕಾರದ ಅವಧಿಯಲ್ಲಿ ಕೇವಲ 4,700 ಶಿಕ್ಷಕರ ನೇಮಕ ಮಾಡಲಾಗಿತ್ತು. ತಾನು ಶಿಕ್ಷಣ ಸಚಿವನಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಈಗಾಗಲೇ 13,000 ಸಾವಿರ ಶಿಕ್ಷಕರ ನೇಮಕಾತಿ ನಡೆದಿದ್ದು, ಮತ್ತೆ 18,500 ಶಿಕ್ಷಕರ ನೇಮಕಾತಿಗೆ ಸಿದ್ಧತೆ ನಡೆದಿದೆ. ಜಸ್ಟಿಸ್ ನಾಗಮೋಹನ್ದಾಸ್ ಅವರ ವರದಿಯ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬವಾಗಿತ್ತು ಎಂದವರು ಹೇಳಿದರು. ಎಲ್ ಕೆಜಿಯಿಂದ 12ನೆ ತರಗತಿವರೆಗೆ ಕೆಪಿಎಸ್ (ಕರ್ನಾಟಕ ಪಬ್ಲಿಕ್ ಸ್ಕೂಲ್)ಮಾದರಿಯಡಿ ಶೇ. 80ರಷ್ಟು ಸರಕಾರಿ ಶಾಲೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ. ಈ ಶಾಲೆಗಳಲ್ಲಿ ಫಲಿತಾಂಶದ ಗುಣಮಟ್ಟವನ್ನು ಹೆಚ್ಚಿಸುವ ಸಲುವಾಗಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಿ



ಪರೀಕ್ಷೆಯಲ್ಲಿ ನಕಲು ಮಾಡುವುದಕ್ಕೆ ಕಡಿವಾಣ ಹಾಕಲಾಗಿದೆ. ಇದೇ ವೇಳೆ 3 ಸ್ತರದ ಪರೀಕ್ಷಾ ಪದ್ಧತಿಯೂ ಕೂಡಾ ಮಕ್ಕಳ ಫಲಿತಾಂಶವನ್ನು ಉತ್ತಮ ಪಡಿಸಲು ಸಹಕಾರಿಯಾಗಿದೆ.

ಈ ಪರೀಕ್ಷಾ ವ್ಯವಸ್ಥೆಯಿಂದ 2ನೇ ಸ್ತರ ಹಾಗೂ 3ನೇ ಸ್ತರದ ಎಸೆಸೆಲ್ಸಿ ಪರೀಕ್ಷೆಯಲ್ಲಿ 11,6000 ಮಕ್ಕಳು ಉತ್ತೀರ್ಣರಾಗಿದ್ದು, ಪಿಯುಸಿಯಲ್ಲೂ 56,000ಕ್ಕೂ ಅಧಿಕ ಮಕ್ಕಳು ಉತ್ತೀರ್ಣರಾಗಿದ್ದಾರೆ. ಈ ಪರೀಕ್ಷಾ ವ್ಯವಸ್ಥೆಯನ್ನು ಉಚಿತವಾಗಿ ಮಾಡುವ ಮೂಲಕ ನಾನಾ ಕಾರಣಗಳಿಂದ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಅವಕಾಶ ಕಲ್ಪಿಸಿ ಮುಂದಿನ ಭವಿಷ್ಯ ರೂಪಿಸಲು ಅನುವು ಮಾಡಿಕೊಡಲಾಗಿದೆ. ಈ ಮಾದರಿಯನ್ನು ಕೇಂದ್ರ ಸರಕಾರವೂ ಕಾಪಿ ಮಾಡಿಕೊಳ್ಳಲು ಹೊರಟಿದೆ ಎಂದು ಎಸ್.ಮಧು ಬಂಗಾರಪ್ಪ ಹೇಳಿದರು. ದ.ಕ. ಮತ್ತು ಉಡುಪಿಯಲ್ಲಿ ತಾಂತ್ರಿಕ ಕಾರಣದಿಂದ ಸಮೀಕ್ಷೆ ವಿಳಂಬವಾಗಿದೆ. ರಾಜ್ಯದಲ್ಲಿ ನಿನ್ನೆಯವರೆಗೆ ಬೆಂಗಳೂರು ಹೊರತುಪಡಿಸಿ ಒಟ್ಟು ಶೇ.71.5ರಷ್ಟು ಸಮೀಕ್ಷೆ ನಡೆದಿದೆ. ದ.ಕ. ಜಿಲ್ಲೆಯ ಸುಳ್ಯದಲ್ಲಿ ಶೇ.100ರಷ್ಟು ಸಮೀಕ್ಷೆ ಆಗಿದೆ. ಬೆಳ್ತಂಗಡಿಯಲ್ಲೂ ಶೇ.76ರಷ್ಟು ಸಮೀಕ್ಷೆ ಆಗಿದೆ. ಮುಂದೆ ಆಯೋಗದ ತೀರ್ಮಾನದಂತೆ ಸಮೀಕ್ಷೆ ಕಾರ್ಯ ಮುಂದುವರಿಸುವ ನಿರ್ಧಾರವಾಗಲಿದೆ ಎಂದು ಹೇಳಿದರು. ಅಕ್ಟೋಬರ್ 8ರಿಂದ ಶಾಲೆಗಳು ಪುನರಾರಂಭಗೊಳ್ಳಲಿವೆ. ಅವರೆಗೆ ಎಷ್ಟು ಪ್ರಮಾಣದ ಸಮೀಕ್ಷೆ ಆಗಿದೆ ಎಂಬ ನೆಲೆಯಲ್ಲಿ ಆಯೋಗದ ನಿರ್ದೇಶನದ ಮೇರೆಗೆ, ಮುಂದೆ ಸಮೀಕ್ಷೆಗೆ ಶಿಕ್ಷಕರನ್ನು ಮಕ್ಕಳ ಪಾಠ–ಚಟುವಟಿಕೆಗಳಿಗೆ ತೊಂದರೆ ಆಗದಂತೆ ಯಾವ ರೀತಿಯಲ್ಲಿ ಬಳಸಿಕೊಳ್ಳಬೇಕು ಎಂಬ ಬಗ್ಗೆ ಇಲಾಖೆ ನಿರ್ಧರಿಸಲಿದೆ. ಶೇ.95ರಷ್ಟು ಶಿಕ್ಷಕರು ರಾಜ್ಯದಲ್ಲಿ ಸಮೀಕ್ಷೆಯಲ್ಲಿ ಮುಂಚೂಣಿಯಲ್ಲಿದ್ದು ಸಹಕರಿಸಿದ್ದಾರೆ ಎಂದವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹರೀಶ್ ಕುಮಾರ್, ಮುಡಾ ಅಧ್ಯಕ್ಷ ಸದಾಶಿವ ಉಳ್ಳಾಲ್, ಮುಖಂಡರಾದ ಪದ್ಮರಾಜ್, ಶುಭೋದಯ ಆಳ್ವ, ಪದ್ಮನಾಭ ಕೋಟ್ಯಾನ್, ಟಿ.ಕೆ.ಸುಧೀರ್, ನೀರಜ್ ಪಾಲ್ ಮತ್ತಿತರರು ಉಪಸ್ಥಿತರಿದ್ದರು.

## ಬದಲಾವಣೆ ಬೇಡ ಎನ್ನುವವರು ಸಮೀಕ್ಷೆಯನ್ನು ವಿರೋಧಿಸುತ್ತಾರೆ

**ಕೊಪ್ಪಳ:** "ಸಮೀಕ್ಷೆಯ ಹಿಂದೆ ಯಾರನ್ನೂ ತುಳಿಯುವ ಪ್ರಶ್ನೆ ಇಲ್ಲ. ಸಮಸಮಾಜ ನಿರ್ಮಾಣ ಮಾಡಬೇಕು ಎಂಬುದು ನಮ್ಮ ಉದ್ದೇಶ. ಬದಲಾವಣೆ ಬೇಡ ಎನ್ನುವವರು ಸಮೀಕ್ಷೆ ವಿರೋಧಿಸುತ್ತಿದ್ದಾರೆ" ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

"ಕೊಪ್ಪಳ ಜಿಲ್ಲೆಯಲ್ಲಿ 97%ರಷ್ಟು ಸಮೀಕ್ಷೆ ಮುಗಿದಿದೆ. ಸಮೀಕ್ಷೆ ಮಂಗಳವಾರ ಮುಗಿಯಬಹುದೆಂಬ ವಿಶ್ವಾಸ ಇದೆ. ಮಂಗಳವಾರ ಸಾಯಂಕಾಲದವರೆಗೂ ಸಮಯವಿದೆ. ಎರಡು ದಿನಗಳಲ್ಲಿ ಸಮೀಕ್ಷೆ ಮುಗಿಯಬಹುದು" ಎಂದು ಸಿಎಂ ಹೇಳಿದರು.

ಕೊಪ್ಪಳದ ಬಸಾಪೂರದಲ್ಲಿರುವ ಖಾಸಗಿ ವಿಮಾನ ನಿಲ್ದಾಣದಲ್ಲಿ ಇಂದು ಸಿಎಂ ಸಿದ್ದರಾಮಯ್ಯ ಮಾಧ್ಯಮದವರೊಂದಿಗೆ ಮಾತನಾಡಿದರು.ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಮೀಕ್ಷೆಯಲ್ಲಿ ಭಾಗಿಯಾಗುವುದಿಲ್ಲ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿ, ಕೇಂದ್ರ ಸರ್ಕಾರ ಜಾತಿ ಗಣತಿ ಮಾಡುತ್ತದೆ, ಆಗ ಅದನ್ನು ವಿರೋಧ ಮಾಡುತ್ತಾರಾ ಇದನ್ನು ನೀವು ಅವರಿಗೆ ಕೇಳಿದ್ದೀರಾ ಎಂದು ಮಾಧ್ಯಮದವರ ಮೇಲೆ ಗರಂ ಆದರು. ಲಿಂಗಾಯತ ಪ್ರತ್ಯೇಕ ಧರ್ಮದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, "ಪ್ರತ್ಯೇಕ ಲಿಂಗಾಯತ ಧರ್ಮದ ವಿಚಾರದಲ್ಲಿ ನನ್ನ ನಿಲುವೇನೂ ಇಲ್ಲ. ಈ ವಿಚಾರವಾಗಿ ಯಾವ ಮುನ್ನೆಲೆಯೂ ಇಲ್ಲ, ಹಿನ್ನೆಲೆಯೂ ಇಲ್ಲ. ಕೆಲ ವಿರಕ್ತ ಸ್ವಾಮೀಜಿಗಳು ಅದರ ಬಗ್ಗೆ ಮಾತನಾಡುತ್ತಿದ್ದಾರೆ" ಎಂದಷ್ಟೇ ಹೇಳಿದರು. ಈ ಮಧ್ಯೆ ಸಿಎಂ, "ಕೊಪ್ಪಳದಲ್ಲಿ



ನಾನೊಂದು ಸಲ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದ್ದೆ. ಆದರೆ ಜನ ಸೋಲಿಸಿದ್ದರು. ಆದರೂ ಅವತ್ತು ಕಡಿಮೆ ಅಂತರದಲ್ಲಿ ಸೋಲಿಸಿದ್ದಾರೆ. ಅದಕ್ಕೆ ಕೊಪ್ಪಳ ಜಿಲ್ಲೆಯ ಜನತೆಗೆ ಧನ್ಯವಾದ" ಎಂದರು. ಬಳಿಕ ಬಲ್ಡೋಟಾ ಕಾರ್ಖಾನೆಗಾಗಿ ಜಮೀನು ಕಳೆದುಕೊಂಡ ವಿಚಾರಕ್ಕೆ, ಅದು ಕೋರ್ಟ್‌ನಲ್ಲಿದೆ ನೋಡೋಣ ಎಂದು ಉತ್ತರಿಸಿದರು.

**ಕ್ರಾಂತಿಯೂ ಇಲ್ಲ, ಭ್ರಾಂತಿಯೂ ಇಲ್ಲ:** ನವೆಂಬರ್‌ನಲ್ಲಿ ಸರಕಾರದಲ್ಲಿ ಹೊಸ ಕ್ರಾಂತಿ ನಡೆಯಲಿದೆಯೇ ಎಂಬ ಪ್ರಶ್ನೆಗೆ, ನವೆಂಬರ್‌ನಲ್ಲಿ ಯಾವ ಕ್ರಾಂತಿನೂ ಇಲ್ಲ, ಭ್ರಾಂತಿನೂ ಇಲ್ಲ ಎಂದು ಹೇಳಿ ಹೊರಟು ಹೋದರು.

**ಸಾಮಾಜಿಕ,ಶೈಕ್ಷಣಿಕ ಸಮೀಕ್ಷೆಯ ಸ್ಥಿತಿಗತಿ:** ರಾಜ್ಯದಲ್ಲಿ ಸೆ.22ರಿಂದ ಹಿಂದುಳಿದ ವರ್ಗಗಳ ಆಯೋಗ ಸಮೀಕ್ಷೆ ನಡೆಸುತ್ತಿದೆ. ನಿನ್ನೆಗೆ ಶೇ.76.41ರಷ್ಟು ಸಮೀಕ್ಷೆ ಪೂರ್ಣವಾಗಿದೆ. ಒಟ್ಟು 1,09,86,580 ಮನೆಗಳನ್ನು ಸಮೀಕ್ಷೆ ಮಾಡಲಾಗಿದೆ. ಭಾನುವಾರ ಒಟ್ಟು 7,03,364 ಮನೆಗಳ ಸಮೀಕ್ಷೆ ನಡೆಸಲಾಗಿದೆ.

## ಸ್ಥಳೀಯ ಸಂಸ್ಥೆ ಚುನಾವಣೆಗೆ ಸಜ್ಜಾಗಿ: ಮಂಜುನಾಥ್ ಗೌಡ

**ಚಿಕ್ಕೋಡಿ:** "ಕೇಂದ್ರದ ಬಿಜೆಪಿ ಸರ್ಕಾರವು ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ನಿರಂತರವಾಗಿ ಅನ್ಯಾಯ ಮಾಡುತ್ತಿದೆ. ಇದರ ವಿರುದ್ಧ ರಾಜ್ಯದ ಒಬ್ಬನೇ ಒಬ್ಬ ಬಿಜೆಪಿ ಸಂಸದ ಧ್ವನಿ ಎತ್ತುತ್ತಿಲ್ಲ. ಕನ್ನಡಿಗರನ್ನು ದ್ವೇಷದಿಂದ ನೋಡುವ ಕೇಂದ್ರಕ್ಕೆ ತಕ್ಕ ಪಾಠ ಕಲಿಸಬೇಕಿದೆ." ಎಂದು ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಅಧ್ಯಕ್ಷ ಎಚ್.ಎಸ್. ಮಂಜುನಾಥ್ ಗೌಡ ಆಕ್ರೋಶ ವ್ಯಕ್ತಪಡಿಸಿದರು.

ಚಿಕ್ಕೋಡಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯು ಆಯೋಜಿಸಿದ್ದ ಯುವ ಸಮ್ಮೇಳನ ಹಾಗೂ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಜ್ಜಾಗುವಂತೆ ಕಾರ್ಯಕರ್ತರಿಗೆ ಕರೆ ನೀಡಿದರು. "ನಾವು 4.5 ಲಕ್ಷ ಕೋಟಿ ರೂಪಾಯಿ ತೆರಿಗೆ ಕಟ್ಟಿದರೆ, ಕೇಂದ್ರ ನಮಗೆ ವಾಪಸ್ ನೀಡುತ್ತಿರುವುದು ಕೇವಲ 14 ಪೈಸೆ. ಈ ಆರ್ಥಿಕ ಅನ್ಯಾಯದ ವಿರುದ್ಧ ಮುಖ್ಯಮಂತ್ರಿಗಳು ನ್ಯಾಯಾಲಯದ ಮೊರೆ ಹೋಗುವ ಎಚ್ಚರಿಕೆ ನೀಡಿದ್ದಾರೆ. ಬಿಜೆಪಿ ಕೇವಲ ಹಿಂದೂ–ಮುಸ್ಲಿಂ ದ್ವೇಷ ಬಿತ್ತಿ ಸಮಾಜ ಒಡೆಯುತ್ತಿದೆ. ಗಡಿಭಾಗದಲ್ಲಿ ಮರಾಠಿ–ಕನ್ನಡಿಗರ ನಡುವೆ ಕಿಚ್ಚು ಹಚ್ಚಲು ಯತ್ನಿಸುತ್ತಿದೆ. ಈ ಎಲ್ಲಾ ಜನವಿರೋಧಿ ನೀತಿಗಳ ಬಗ್ಗೆ ಜನರಿಗೆ ಅರಿವು ಮೂಡಿಸಿ."



ಎಂದು ಅವರು ಹೇಳಿದರು.

"ನಮ್ಮ ಸರ್ಕಾರ ನೀಡಿದ್ದ ಪಂಚ ಗ್ಯಾರಂಟಿಗಳನ್ನು ನೀವು ಮನೆ ಮನೆಗೆ ತಲುಪಿಸಿದ್ದೀರಿ. ಅದರ ಫಲವಾಗಿಯೇ ಚಿಕ್ಕೋಡಿ ಭಾಗದ ಎಂಟು ಸ್ಥಾನಗಳಲ್ಲಿ ಐದರಲ್ಲಿ ಪಕ್ಷ ಗೆಲುವು ಸಾಧಿಸಿದೆ ಮತ್ತು ಲೋಕಸಭೆಯಲ್ಲೂ ಪ್ರಿಯಾಂಕ ಜಾರಕಿಹೊಳಿ ಅವರು ಭರ್ಜರಿ ಜಯಗಳಿಸಿದ್ದಾರೆ." ಎಂದು ಕಾರ್ಯಕರ್ತರ ಶ್ರಮವನ್ನು ಶ್ಲಾಘಿಸಿದರು.

ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಮತ್ತು ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಾಹುಲ್ ಜಾರಕಿಹೊಳಿ ಉಪಸ್ಥಿತರಿದ್ದರು.

ರಾಷ್ಟ್ರೀಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ನಿಗಮ ಭಂಡಾರಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ, ರಾಜ್ಯ ಯುವ ಕಾಂಗ್ರೆಸ್ ಉಪಾಧ್ಯಕ್ಷ ಅಬ್ದುಲ್ ದೇಸಾಯಿ, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಸಯ್ಯದ್ ಸಾಧಿಕ ಮತ್ತು ಬಾಹುಬಲಿ ಜೈನ್, ರಾಜ್ಯ ಕಾರ್ಯದರ್ಶಿ ಉದಯ ವೀರಗೌಡರ, ಕಾನೂನು ಘಟಕದ ಅಧ್ಯಕ್ಷ ಶ್ರೀಧರ ಜಾಧವ, ಮಾಧ್ಯಮ ಘಟಕದ ಅಧ್ಯಕ್ಷ ದೀಪಕಗೌಡ, ಮತ್ತು ಚಿಕ್ಕೋಡಿ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನಿರ್ಮಲಾ ಪಾಟೀಲ, ಚಿಕ್ಕೋಡಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಸಿದ್ದಿಕ ಅಂಕಲಗಿ ಇದ್ದರು.

## ವಾಲ್ಮೀಕಿ ಸಮುದಾಯಕ್ಕೆ ಸಚಿವ ಸ್ಥಾನ ನೀಡುವಂತೆ ಒತ್ತಡ ಹಾಕುತ್ತೇವೆ

**ಬೆಳಗಾವಿ:** ಇಂದು ನಡೆಯಲಿರುವ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಖಾಲಿ ಇರುವ ಎರಡು ಸಚಿವ ಸ್ಥಾನಗಳನ್ನು ವಾಲ್ಮೀಕಿ ಸಮುದಾಯಕ್ಕೆ ನೀಡುವಂತೆ ಸ್ವಾಮೀಜಿ ನೇತೃತ್ವದಲ್ಲಿ ಬೇಡಿಕೆ ಇಡುತ್ತೇವೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಈ ಕುರಿತು ನಗರದಲ್ಲಿ ಮಾಧ್ಯಮದವರ ಜೊತೆಗೆ ಮಾತನಾಡಿದ ಅವರು, 'ನಾಗೇಂದ್ರ ಮತ್ತು ಕೆ. ಎನ್. ರಾಜಣ್ಣ ಅವರ ರಾಜೀನಾಮೆಯಿಂದ ತೆರವಾಗಿರುವ ಎರಡು ಸಚಿವ ಸ್ಥಾನಗಳನ್ನು ಭರ್ತಿ ಮಾಡುವಂತೆ ಈ ಹಿಂದೆಯೇ ಬೇಡಿಕೆ ಇಟ್ಟಿದ್ದೇವೆ. ಆದಷ್ಟು ಬೇಗನೆ ಈ ಸಮುದಾಯಕ್ಕೆ ಸಚಿವ ಸ್ಥಾನ ನೀಡುವಂತೆ ತಿಳಿಸಿದ್ದೇವೆ. ನಾಳೆ ನಡೆಯಲಿರುವ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ವಾಲ್ಮೀಕಿ ಪೀಠದ ಪ್ರಸನ್ನಾನಂದ ಸ್ವಾಮೀಜಿ ನೇತೃತ್ವದ ನಿಯೋಗದ ಮೂಲಕ ಮುಖ್ಯಮಂತ್ರಿ ಮತ್ತು ಪಕ್ಷದ ಅಧ್ಯಕ್ಷರಿಗೆ ಭೇಟಿಯಾಗಿ ಒತ್ತಡ ಹಾಕುತ್ತೇವೆ' ಎಂದಿದ್ದಾರೆ.

ಸಿಎಂ ಸಿದ್ದರಾಮಯ್ಯ ಕಾರ್ಯವೈಖರಿ ಕುರಿತು ಮಾಜಿ ಸಚಿವ ರಾಜಣ್ಣ ಹೇಳಿಕೆ ಕುರಿತ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಇದನ್ನು ನೀವು ಅವರನ್ನೇ ಕೇಳಬೇಕು. ನಾನು ಹೇಳುವುದಕ್ಕೆ ಆಗುವುದಿಲ್ಲ. ಅವರವರ



ವರ್ಕಿಂಗ್ ಸ್ಟೈಲ್ ಹೇಗಿರಬೇಕು ಅಂತಾ ನಾವು ಹೇಳೋಕೆ ಆಗಲ್ಲ. ಅದು ಅವರ ವರ್ಕಿಂಗ್ ಸ್ಟೈಲ್ ಅಂತಾ ತಿಳಿಸಿದರು.

ಬರುವ ಎರಡೂವರೆ ವರ್ಷ ನಾನೇ ಸಿಎಂ ಎಂಬ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿ ಆಗಿ ನಾನೇ ಮುಂದುವರೆಯುತ್ತೇನೆ ಅಂತಾ ಹೇಳಿದ್ದಾರೆ. ಹೀಗಾಗಿ ಗೊಂದಲಕ್ಕೆ ತೆರೆ ಬಿದ್ದಿದೆ ಎಂದು ನಾವು ಭಾವಿಸಿದ್ದೇವೆ. ಅಂತಿಮವಾಗಿ ಹೈಕಮಾಂಡ್ ಹೇಳಬೇಕಾಗುತ್ತದೆ ಎಂದರು.

ಡಿ. ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗಬೇಕು ಎಂದು ಇನ್ನೂ ಅವರ ಆಪ್ತರು ಹೇಳುತ್ತಿರುವುದಕ್ಕೆ ಪ್ರತಿಕ್ರಿಯಿಸಿದ ಸತೀಶ್? ಜಾರಕಿಹೊಳಿ, ಮುಖ್ಯಮಂತ್ರಿ ವಿಚಾರದಲ್ಲಿ ಪಕ್ಷದಲ್ಲಿ ಗೊಂದಲ ಇಲ್ಲ ಅಂತಾ ಹೇಳೋಕೆ ಆಗಲ್ಲ, ಗೊಂದಲ ಇದೆ. ಆ ಗೊಂದಲವನ್ನು ಸರಿಪಡಿಸುವ ಕೆಲಸವನ್ನು ಹೈಕಮಾಂಡ್ ಮಾಡಬೇಕು ಎಂದು ಹೇಳಿದರು.

ಗಣತಿಯಲ್ಲಿ ಹೆಚ್ಚು ಪ್ರಶ್ನಾವಳಿ ಇವೆ ಅಂತಾ ಡಿಸಿಎಂ ಡಿ. ಕೆ. ಶಿವಕುಮಾರ್ ಅಸಮಾಧಾನ ವಿಚಾರದ ಕುರಿತು ಪ್ರತಿಕ್ರಿಯಿಸಿ, 'ಗೋಕಾಕ್‌ನಲ್ಲಿ ನಿನ್ನೆ ನನ್ನ ಗಮನಕ್ಕೂ ಇದು ಬಂದಿದೆ. 60 ಪ್ರಶ್ನೆಗಳಿವೆ. ಅವುಗಳಿಗೆ ಉತ್ತರಿಸಲು ಹಿಂದೇಟು ಹಾಕುತ್ತಿದ್ದಾರೆ. ನಾವು ಯಾಕೆ ನಮ್ಮ ವೈಯಕ್ತಿಕ ವಿಚಾರಗಳನ್ನು ಬಹಿರಂಗಪಡಿಸಬೇಕು ಅಂತಾ ಕೆಲವರು ಪ್ರಶ್ನಿಸಿದ್ದಾರೆ. ಹಾಗಾಗಿ, ಪ್ರಶ್ನೆಗಳನ್ನು ಕಡಿಮೆ ಮಾಡಿದರೆ ಒಳ್ಳೆಯದು' ಎಂದು ಅಭಿಪ್ರಾಯಪಟ್ಟರು.

ರಾಹುಲ್ ಜಾರಕಿಹೊಳಿ ಡಿಸಿಸಿ ಬ್ಯಾಂಕ್ ಚುನಾವಣೆಯ ಸ್ಪರ್ಧೆ ವಿಚಾರಕ್ಕೆ ಪ್ರತಿಕ್ರಿಯಿಸಿ, 'ಇನ್ನೂ ಚರ್ಚೆಯಲ್ಲಿದೆ. ಎಲ್ಲ ನಾಯಕರು ಕೂಡಿ ಚರ್ಚೆ ಮಾಡಿ, ನಿಲ್ಲಿಸಬೇಕೋ, ಬೇಡವೋ ಎಂಬುದನ್ನು ಬರುವ ನಾಲ್ಕೈದು ದಿನಗಳಲ್ಲಿ ನಿರ್ಧಾರ ಪ್ರಕಟಿಸುತ್ತೇವೆ. ಕನಿಷ್ಠ 10 ತಾಲೂಕುಗಳಲ್ಲಿ ಅವಿರೋಧ ಆಯ್ಕೆಗೆ ನಾವು ಪ್ರಯತ್ನಿಸುತ್ತಿದ್ದೇವೆ. ಇನ್ನುಳಿದಂತೆ ಐದು ತಾಲೂಕುಗಳಲ್ಲಿ ಸ್ಥಳೀಯ ಸಮಸ್ಯೆ ಇರುವ ಹಿನ್ನೆಲೆಯಲ್ಲಿ ಚುನಾವಣೆ ಆಗಲಿದೆ. ಆದರೂ ಇನ್ನಷ್ಟು ಕ್ಷೇತ್ರಗಳಲ್ಲಿ ಅವಿರೋಧ ಆಯ್ಕೆಗೆ ಕೊನೆವರೆಗೂ ಪ್ರಯತ್ನ ಮಾಡುತ್ತೇವೆ' ಎಂದರು.

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ






# ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ

ಹಾಗೂ

# ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ ಸಮಾರಂಭ

ದಿನಾಂಕ : 07-10-2025, ಮಂಗಳವಾರ

## ಶ್ರೀ ಮಹರ್ಷಿ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ

ಸಮಯ : ಬೆಳಿಗ್ಗೆ 10.00 ಗಂಟೆಗೆ
ಸ್ಥಳ : ಶ್ರೀ ಮಹರ್ಷಿ ವಾಲ್ಮೀಕಿ ತಪೋವನ, ಶಾಸಕರ ಭವನದ ಮುಂಭಾಗ

## ವೇದಿಕೆ ಕಾರ್ಯಕ್ರಮ

ಸಮಯ : ಬೆಳಿಗ್ಗೆ 10.30 ಗಂಟೆಗೆ
ಸ್ಥಳ : ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು

# ಸರ್ಕಾರದ ನಡೆ.. ಬುಡಕಟ್ಟು ಸಮುದಾಯಗಳ ಅಭಿವೃದ್ಧಿಯ ಕಡೆ...



ಶ್ರೀ ಸಿದ್ದರಾಮಯ್ಯ
ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

28 ತಿಂಗಳು

## ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಟಿಎಸ್‌ಪಿ ಯೋಜನೆಯಡಿ 33,372.33 ಕೋಟಿ ಹಂಚಿಕೆ

### ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು

- 8.66 ಲಕ್ಷ ವಿದ್ಯಾರ್ಥಿಗಳಿಗೆ ಒಟ್ಟು ರೂ. 410 ಕೋಟಿ ವಿದ್ಯಾರ್ಥಿ ವೇತನ
- 99,123 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಒಟ್ಟು ರೂ. 161.99 ಕೋಟಿ ಪ್ರೋತ್ಸಾಹ ಧನ
- 403 ಸಂಸ್ಥೆಗಳ ಮೂಲಕ 45,360 ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ
- ಪ್ರಬುದ್ಧ ಯೋಜನೆ (ವಿದೇಶಿ ವಿ.ವಿಗಳಲ್ಲಿ ಅಧ್ಯಯನ) - 109 ವಿದ್ಯಾರ್ಥಿಗಳಿಗೆ ರೂ. 39.00 ಕೋಟಿ ಸಹಾಯಧನ
- 34 ಹೊಸ ವಿದ್ಯಾರ್ಥಿ ನಿಲಯಗಳ ಸ್ಥಾಪನೆ
- 12ನೇ ತರಗತಿಯವರೆಗೆ 5 ಆಶ್ರಮ ಶಾಲೆಗಳ ಉನ್ನತೀಕರಣ
- ಖಾಸಗಿ ವಿದ್ಯಾಸಂಸ್ಥೆಗಳಲ್ಲಿ ಮ್ಯಾನೇಜ್‌ಮೆಂಟ್/ ಎನ್.ಆರ್.ಐ. ಕೋಟಾದಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕ ಮರುಪಾವತಿ

### ಇಲಾಖೆಯ ಇತರೆ ಪ್ರಮುಖ ಕಾರ್ಯಕ್ರಮಗಳು

- ಪ್ರತ್ಯೇಕ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವಾಲಯ ಸ್ಥಾಪನೆ
- 12 ಬುಡಕಟ್ಟು ಸಮುದಾಯಗಳ 47,981 ಕುಟುಂಬಗಳಿಗೆ ಪೌಷ್ಟಿಕ ಆಹಾರ: ರೂ. 261 ಕೋಟಿ ವಿನಿಯೋಗ
- ವಸತಿ ರಹಿತ 12,286 ಬುಡಕಟ್ಟು ಕುಟುಂಬಗಳಿಗೆ ಮನೆ ಮಂಜೂರು
- ಕಾಲೋನಿ/ ಹಾಡಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ರೂ. 231 ಕೋಟಿ ಹಂಚಿಕೆ
- ವಾಲ್ಮೀಕಿ ಭವನ/ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ರೂ. 95 ಕೋಟಿ ಹಂಚಿಕೆ
- 5 ಜಿಲ್ಲೆಗಳಲ್ಲಿ ಟ್ರೈಬಲ್ ನ್ಯಾವಿಗೇಟರ್ ಕಾರ್ಯಕ್ರಮ ಜಾರಿ
- ಪರಿಶಿಷ್ಟ ಪಂಗಡದ 350 ಉದ್ಯಮಿಗಳಿಗೆ ರೂ. 34.50 ಕೋಟಿ ಬಡ್ಡಿ ಸಹಾಯಧನ
- ಎಸ್‌ಸಿಎಸ್‌ಪಿ/ ಟಿಎಸ್‌ಪಿ ಅಧಿನಿಯಮ 2013ರ ಸೆಕ್ಷನ್ 7(ಡಿ) ಅನ್ನು ಕೈಬಿಡಲಾಗಿದೆ
- ಗಂಗಾ ಕಲ್ಯಾಣ ಯೋಜನೆಯಡಿ 5,699 ಫಲಾನುಭವಿಗಳಿಗೆ ಕೊಳವೆಬಾವಿ ಸೌಲಭ್ಯ
- ಸ್ವಯಂ ಉದ್ಯೋಗಕ್ಕಾಗಿ ರೂ. 169.30 ಕೋಟಿ ಆರ್ಥಿಕ ನೆರವು
- ಮಹಿಳಾ ಸ್ವಸಹಾಯ ಸಂಘಗಳ 4,620 ಸದಸ್ಯರಿಗೆ ಕಿರುಸಾಲ ಸೌಲಭ್ಯ











ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.– ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

X CMofKarnataka https://dipr.karnataka.gov.in/

ಸರ್ವರಿಗೂ ಸುಸ್ವಾಗತ

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು